ಕರ್ನಾಟಕ ವಿಧಾನ ಸಭೆ
KARNATAKA LEGISLATIVE ASSEMBLY

ಮಂಗಳವಾರ 27ನೇ ಫೆಬ್ರವರಿ 1996ರಂದು

ಸದನವು ವಿಧಾನ ಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ 10.00 ಗಂಟೆಗ ಸಮಾವೇಶಗೊಂಡಿತು.

ಅಧ್ಯಕ್ಷರು : (**ಶ್ರೀ ರಮೇಶ ಕುಮಾರ್**) ಅವರು ಪೀಠವನ್ನು ಅಲಂಕರಿಸಿದ್ದರು.

ಸಂತಾಪ ಸೂಚನೆ

ಅಧ್ಯಕ್ಷರು : ವಿಧಾನ ಸಭೆಯ ಮಾಜಿ ಸದಸ್ಯರಾಗಿದ್ದ ಶ್ರೀ ಗೂಡೂ ಸಾಹೇಬ್ ಅವರು ದಿನಾಂಕ 26.02.1996ರಂದು ನಿಧನರಾದುದನ್ನು ವಿಷಾದದಿಂದ ಸಭೆಗೆ ತಿಳಿಸುತ್ತಿದ್ದೇನೆ.

ಶ್ರೀಯುತರು ಆರನೆಯ ವಿಧಾನ ಸಭೆಗ ಬಳ್ಳಾರಿ ಜಿಲ್ಲೆಯ ಹೊಸಪೇಟೆ ಕ್ಷೇತ್ರವನ್ನು ಪ್ರತಿನಿಧಿಸಿದ್ದರು. ಹೊಸಪೇಟೆ ಸಹಕಾರಿ ಬ್ಯಾಂಕಿನ ನಿರ್ದೇಶಕರಾಗಿ, ಪುರಸಭಾ ಅಧ್ಯಕ್ಷರಾಗಿ ಹಾಗೂ ಹಲವಾರು ಸಂಘ ಸಂಸ್ಥೆಗಳ ಪದಾಧಿಕಾರಿಯಾಗಿ ಸಕ್ರೀಯವಾಗಿ ಸೇವ ಸಲ್ಲಿಸಿದ್ದರು.

ಮೃತರ ಗೌರವಾರ್ಥ ಮಾನ್ಯ ಸದಸ್ಯರು ಎದ್ದು ನಿಂತು ಒಂದು ನಿಮಿಷ ಮೌನ ಆಚರಿಸಬೇಕೆಂದು ಕೋರುತ್ತೇನೆ.

(ಮಾನ್ಯ ಸದಸ್ಯರೆಲ್ಲರೂ ಎದ್ದು ನಿಂತು ಒಂದು ನಿಮಿಷ ಮೌನ ಆಚರಿಸಿದರು)

ಈ ಸದನ ಅಂಗೀಕರಿಸಿದ ಸಂತಾಪ ಸೂಚನಾ ನಿರ್ಣಯವನ್ನು ಮೃತರ ಕುಟುಂಬ ವರ್ಗಕ್ಕೆ ಕಳುಹಿಸಿಕೊಡಲಾಗುವುದು.

ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಬಾಯಿ ಮಾತಿನ ಮೂಲಕ ನೀಡಲಾದ ಉತ್ತರಗಳು

ಬೆಂಗಳೂರು ನಗರಕ್ಕೆ ಕಾವೇರಿ ನಾಲ್ಕನೆ ಹಂತದ ನೀರು ಸರಬರಾಜು ಯೋಜನೆ

347 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ), ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬೆಂಗಳೂರು ನಗರಕ್ಕೆ ನೀರು ಒದಗಿಸಲು ಕಾವೇರಿ ನಾಲ್ಕನೇ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದೆಯೇ ?